(ಗೊಂದಲ)

ಶ್ರೀ ಟಿ.ಬಿ. ಜಯಚಂದ್ರ:– Comprehensive bill ಎಂದು ಏನು ಹೇಳುತ್ತೇವೆ, . . .

(ಗೊಂದಲ)

ಶ್ರೀ ಬಿ.ಆರ್. ಪಾಟೀಲ್:– ಒಬ್ಬರು ಮಂತ್ರಿಗಳು ಉತ್ತರವನ್ನು ಕೊಡುತ್ತಿದ್ದಾರೆ, ಇನ್ನೊಬ್ಬರು ಮಾತನಾಡುತ್ತಾರೆ.

(ಗೊಂದಲ)

ಶ್ರೀ ಟಿ.ಬಿ. ಜಯಚಂದ್ರ:– ಮಾನ್ಯ ಅಧ್ಯಕ್ಷರೆ, ನಾಳೆ ಚರ್ಚೆಗೆ ತೆಗೆದುಕೊಳ್ಳೋಣ.

ಅಧ್ಯಕ್ಷರು:– ಆಯಿತು, ನಾಳೆಗೆ ಹಾಕೋಣ. ನಾಳೆಗೆ ಹಾಕಿ.

(ಗೊಂದಲ)

ಅಧ್ಯಕ್ಷರು:– ಮಾನ್ಯ ಸಚಿವರೆ, ಆಯಿತು, ನಾಳೆಗೆ ತೆಗೆದುಕೊಳ್ಳೋಣ. ಆಯಿತು, please. O.K.

2) ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2014

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ವಿನಂತಿಸುತ್ತೇನೆ.

ಅಧ್ಯಕ್ಷರು:– ಹೇಳಿ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಈಗಾಗಲೇ ಕೇಂದ್ರಸರ್ಕಾರ ರಾಜ್ಯಸರ್ಕಾರಗಳ ಜೊತೆ ಒಂದು ಒಪ್ಪಂದವನ್ನು ಮಾಡಿಕೊಂಡಿದೆ. ಹೊರ ರಾಷ್ಟ್ರಗಳಿಂದ ಬಂದಿರತಕ್ಕಂಥ diplomats ಯಾರಾದರೂ ಕೂಡ ನಮ್ಮಲ್ಲಿ ಇಲ್ಲಿ ಯಾವುದಾದರೂ ಒಂದು ವಸ್ತುವನ್ನು ಕೊಂಡುಕೊಂಡಾಗ ಅವರಿಗೆ VAT ಅನ್ನು ತೆರಿಗೆಯ ವಿನಾಯಿತಿಯನ್ನು ಕೊಡಬೇಕೆನ್ನತಕ್ಕಂಥದ್ದಕ್ಕೆ ರಾಜ್ಯ ಮತ್ತು ದೇಶದ ಮಧ್ಯದಲ್ಲಿರತಕ್ಕಂಥ ಒಪ್ಪಂದಕ್ಕೆ ನಾವು ಒಪ್ಪಿದ್ದೇವೆ.

ಶ್ರೀ ಎನ್.ಹೆಚ್. ಕೋನರೆಡ್ಡಿ:– ಅದರ ಪ್ರತಿ ಪೂರೈಸಿ.

ಶ್ರೀ ಟಿ.ಬಿ. ಜಯಚಂದ್ರ:– ಆ ಕಾರಣಗಳಿಗೋಸ್ಕರ ತಿದ್ದುಪಡಿಯನ್ನು ಮಾಡುವುದಕ್ಕೆ ಅವಕಾಶ. ಅವರೇನಾದರೂ ಕೊಂಡುಕೊಂಡಂಥ ಸಂದರ್ಭದಲ್ಲಿ ಮಾತ್ರ ಅವರು claim ಮಾಡಬಹುದೇ ವಿನಃ ಅದು ಜಾಸ್ತಿ ಇಲ್ಲ. ಬಹುಶಃ ಅದನ್ನು ಎಲ್ಲಾ ರೀತಿಯಲ್ಲೂ ಲೆಕ್ಕ ಹಾಕಿದರೂ ಕೂಡ ವರ್ಷಕ್ಕೆ 2–3 ಲಕ್ಷ ರೂಪಾಯಿ ಆಗುವುದಿಲ್ಲ. ಆದ್ದರಿಂದ ಇದೊಂದು ತಿದ್ದುಪಡಿ ಅವಶ್ಯಕತೆ ಇತ್ತು. ತಿದ್ದುಪಡಿಗೆ ಒಪ್ಪಿಗೆ ಕೊಡಬೇಕೆಂದು ಮಾನ್ಯ ಸದಸ್ಯರಲ್ಲಿ ಕೇಳುತ್ತೇನೆ.

ಶ್ರೀ ಎನ್.ಹೆಚ್. ಕೋನರೆಡ್ಡಿ:– ಅದರ ಪ್ರತಿ ಪೂರೈಕೆ ಮಾಡುವುದಕ್ಕೆ ಹೇಳಿ. ಪ್ರತಿಗಳಿಲ್ಲದೆ, ಏನು ತಿದ್ದುಪಡಿ ತಂದಿದ್ದಾರೆಂದೇ ಗೊತ್ತಾಗುವುದಿಲ್ಲ. ಒದಗಿಸಲಿಕ್ಕೆ ಹೇಳಿ.

ಶ್ರೀ ಟಿ.ಬಿ. ಜಯಚಂದ್ರ:– ಮೊನ್ನೆ introduce ಮಾಡಿದಾಗ ಎಲ್ಲಾ ಪ್ರತಿಗಳನ್ನು ಕೂಡ ಇಲ್ಲಿ ಕೊಟ್ಟಿದ್ದೇವೆ.

ಅಧ್ಯಕ್ಷರು:– ಕೊಟ್ಟಿದೆ.

ಶ್ರೀ ಟಿ.ಬಿ. ಜಯಚಂದ್ರ:– ಇದೇನೂ ಅಂಥ major ಆಗಿರತಕ್ಕಂಥದ್ದೇನಲ್ಲ.

ಅಧ್ಯಕ್ಷರು:– Formalities.

ಶ್ರೀ ಟಿ.ಬಿ. ಜಯಚಂದ್ರ:– Diplomats ಹೊರ ದೇಶದಿಂದ ಯಾರಾದರೂ ಬಂದಾಗ ಅವರೇನಾದರೂ ಕೊಂಡುಕೊಂಡಂಥ ಸಂದರ್ಭದಲ್ಲಿ VAT exemption ಅನ್ನು ಕೊಡುವುದಕ್ಕೆ ಒಂದು ಅವಕಾಶವನ್ನು ಮಂಡಿಸಿದ್ದೇವಷ್ಟೇ.

ಅಧ್ಯಕ್ಷರು:– O.K.

ಅಧ್ಯಕ್ಷರು:– ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2014ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆ ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ–2:–

2ನೇ ಖಂಡವು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

2ನೇ ಖಂಡವು ವಿಧೇಯಕದ ಅಂಗವಾಯಿತು.

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು:– ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಪ್ರಸ್ತಾವದ ಅಂಗೀಕಾರ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಅಂಗೀಕಾರ ಪ್ರಸ್ತಾವವನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2014ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ (ಅನುಬಂಧ–7)